# ಕಡಿಮೆಯಾಗಿದೆ ಶಿಶು ಮರಣ ಪ್ರಮಾಣ

## ಕಾರ್ಯನೀತಿ ವಿಶ್ಲೇಷಣೆ ಮತ್ತು ಮೌಲ್ಯಮಾಪನ ಕಾರ್ಯಾಗಾರದ ಸಮಾರೋಪದಲ್ಲಿ ಉಮಾ ಮಹದೇವನ್

ಮೈಸೂರು,ಜೂ.೧೦- ರಾಜ್ಯದಲ್ಲಿ ೨೦೧೫-೧೬ನೇ ಸಾಲಿನಲ್ಲಿ ಶಿಶು ಮರಣ ಪ್ರಮಾಣ ಕಡಿಮೆಯಾಗಿದೆ ಎಂದು ಕರ್ನಾಟಕ ಸರ್ಕಾರದ ಯೋಜನೆ, ಕಾರ್ಯಕ್ರಮ ಸಂಯೋಜನೆ, ಸಾಂಖ್ಯಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಉಮಾ ಮಹದೇವನ್ ತಿಳಿಸಿದರು.

ಗ್ರಾಮ್ ವತಿಯಿಂದ ಹೆಬ್ಬಾಳು ವರ್ತುಲ ರಸ್ತೆಯಲ್ಲಿರುವ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕಾರ್ಯನೀತಿ ವಿಶ್ಲೇಷಣೆ ಮತ್ತು ಮೌಲ್ಯಮಾಪನ ಕಾರ್ಯಾಗಾರದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ೨೦೧೪ರಲ್ಲಿ ಶಿಶು ಮರಣ ಸಾವಿರಕ್ಕೆ ೩೧ ಇತ್ತು. ಅದು ೨೦೧೫-೧೬ರಲ್ಲಿ ಸಾವಿರಕ್ಕೆ ೨೮ಕ್ಕೆ ಇಳಿದಿದೆ. ಶಿಶು ಮರಣ ಪ್ರಮಾಣವನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಹಲವು ಕಾರ್ಯಕ್ರಮಗಳು ಇದಕ್ಕೆ ಕಾರಣ. ೨೦೦೫-೦೬ರ ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆಗೆ ಹೋಲಿಸಿದರೆ ೧೦ ವರ್ಷಗಳಲ್ಲಿ ದೇಶದ ಜನರ ಆರೋಗ್ಯದಲ್ಲಿ ಸಾಕಷ್ಟು ಸುಧಾರಣೆ ಕಂಡು ಬಂದಿದೆ ಎಂದರು.

**ಕ್ಷೀರಭಾಗ್ಯಕ್ಕೆ ಉತ್ತಮ ಪ್ರತಿಕ್ರಿಯೆ:** ದೇಶದಲ್ಲಿಯೇ ಮೊದಲ ಬಾರಿಗೆ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಕ್ಷೀರಭಾಗ್ಯ ಯೋಜನೆಗೆ ಉತ್ತಮ ಪ್ರತಿಕ್ರಿಯೆ ದೊರಕಿದೆ ಎನ್ನುವುದು ಸಮೀಕ್ಷೆಯಿಂದ ತಿಳಿದು ಬಂದಿದೆ ಎಂದರು.

ಸಮೀಕ್ಷೆಯಲ್ಲಿ ಮಕ್ಕಳು ಹಾಲು ಕುಡಿಯುತ್ತಿರುವ ಬಗ್ಗೆ ಸಂತೋಷಗೊಂಡಿದ್ದಾರೆ. ಜತೆಗೆ ಅವರ ಆರೋಗ್ಯದಲ್ಲೂ ಸುಧಾರಣೆ ಕಂಡಿದೆ ಎಂದ ಅವರು, ಅಂಗನವಾಡಿ ಕಾರ್ಯಕರ್ತರು, ಪೋಷಕರು, ಶಾಲಾ ಶಿಕ್ಷಕರನ್ನು ಸಮೀಕ್ಷೆಯಲ್ಲಿ ಒಳಪಡಿಸಲಾಗಿದ್ದು, ಅವರಿಂದಲೂ ಉತ್ತಮ ಪ್ರತಿಕ್ರಿಯೆ ಬಂದಿದೆ ಎಂದರು.

ಗ್ರಾಮ್ ಅಧ್ಯಕ್ಷ ಡಾ.ಆರ್.ಬಾಲಸುಬ್ರಮಣ್ಯಂ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಎಂಪ್ಲಾಯ್‌ಮೆಂಟ್ ಅಂಡ್ ಡಿಸೆಬಿಲಿಟಿ ಇನ್‌ಸ್ಟಿಟ್ಯೂಟ್ ಉಪನ್ಯಾಸಕ ಡಾ.ಅರುಣ್ ಕಮೂರ್, ಗ್ರಾಮ್ ಕಾರ್ಯನಿರ್ವಾಹಕ ನಿರ್ದೇಶಕ ಆರ್.ಬಸವರಾಜು ಉಪಸ್ಥಿತರಿದ್ದರು. ಶಿಬಿರಾರ್ಥಿಗಳು ತಮ್ಮ ಅನುಭವ ಹಂಚಿಕೊಂಡರು.



ಮೈಸೂರಿನ ಹೆಬ್ಬಾಳು ವರ್ತುಲ ರಸ್ತೆಯಲ್ಲಿರುವ ವಿಲೇಜ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕಾರ್ಯಾಗಾರದ ಸಮಾರೋಪ ಸಮಾರಂಭದಲ್ಲಿ ಕರ್ನಾಟಕ ಸರ್ಕಾರದ ಸಾಂಖ್ಯಿಕ ಇಲಾಖೆ ಪ್ರಧಾನ ಕಾರ್ಯದರ್ಶಿ ಉಮಾ ಮಹದೇವನ್ ಮಾತನಾಡುತ್ತಿರುವುದು.